# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ:2225-03-102-0-12(059) ರಡಿ ಒದಗಿಸಿರುವ ಅನುದಾನದಲ್ಲಿ ಮೂರು ಮತ್ತು ನಾಲ್ಕನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 339 ಬಿಎಂಎಸ್ 2021, ದಿನಾಂಕ: 22.04.2021 ಮತ್ತು ದಿನಾಂಕ: 16.07.2021.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್ ಪಿ 2021, ದಿನಾಂಕ:30.09.2021 ಮತ್ತು 31.12.2021.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 134 ವೆಚ್ಚ-3/2022, ದಿನಾಂಕ: 07.03.2022.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಅಮಾಜ-1/ಸಿಆರ್- /2021-22, ದಿನಾಂಕ:09.03.2022.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯದಲ್ಲಿ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ:2225-03-102-0-12(059) ರಡಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಮೂರು ಮತ್ತು ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ಆರ್ಥಿಕ ಇಲಾಖೆಯು 2021-22ನೇ ಸಾಲಿಗೆ ಲೆಕ್ಕಶೀರ್ಷಿಕೆ: 2225-03-102-0-12-059 ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಅಭಿವೃದ್ಧಿ ಕಾರ್ಯಕ್ರಮಗಳು ಅಡಿಯಲ್ಲಿ ಉಳಿತಾಯವಾಗುವ ಅನುದಾನವನ್ನು 09 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸ್ವಂತ ಕಟ್ಟಡ ನಿರ್ಮಾಣಕ್ಕೆ ಉಪಯೋಗಿಸಿಕೊಳ್ಳಲು ಆರ್ಥಿಕ ಇಲಾಖೆ ಸಹಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4) ರ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು 2021-22ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ: 2225-03-102-0-12 ರಡಿ ಒಟ್ಟು ರೂ.5797.00 ಲಕ್ಷಗಳನ್ನು ವಿವಿಧ ಆಬ್ಜೆಕ್ಟಿವ್ ಕೋಡ್ ಗಳಡಿ ಒದಗಿಸಲಾಗಿರುತ್ತದೆ. ಆಬ್ಜೆಕ್ಟಿವ್ ಕೋಡ್ 059ರಡಿ ಒಟ್ಟು ರೂ.3099.00 ಲಕ್ಷಗಳನ್ನು ಒದಗಿಸಲಾಗಿದ್ದು, ಅದರಲ್ಲಿ ರೂ.1549.50ಲಕ್ಷಗಳನ್ನು ಮಾತ್ರ ಬಿಡುಗಡೆ ಮಾಡಲಾಗಿದ್ದು, ಬಾಕಿ ರೂ.1549.50ಲಕ್ಷಗಳು ಬಿಡುಗಡೆಯಾಗಬೇಕಾಗಿರುತ್ತದೆ. ಆರ್ಥಿಕ ವರ್ಷದ ಅಂತ್ಯದಲ್ಲಿರುವುದರಿಂದ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶಿರ್ಷಿಕೆ: 2225-03-102-0-12 ಆಬ್ಜೆಕ್ಟಿವ್ ಕೋಡ್ 059 ರಡಿ ಉಳಿಕೆ ಅನುದಾನ ರೂ.1549.50 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

16/3/22

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 339 ಬಿಎಂಎಸ್ 2021,</u>**
**<u>ಬೆಂಗಳೂರು, ದಿನಾಂಕ: 16-03-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರಿಗೆ 2021-22ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ: 2225-03-102-0-12 ರ ಆಬ್ಜೆಕ್ಟಿವ್ ಕೋಡ್ (059) ಒದಗಿಸಿರುವ ಅನುದಾನದಲ್ಲಿ ಮೂರನೇ ಮತ್ತು ನಾಲ್ಕನೇ ಕಂತಿನ ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಕಾರ್ಯಕ್ರಮ/ ಲೆಕ್ಕಶೀರ್ಷಿಕೆ | 2021-22ನೇ ಸಾಲಿಗೆ ಒದಗಿಸಿರುವ ಆಯವ್ಯಯ | ಮೊದಲನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ | ಎರಡನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ | ಮೂರನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ | ನಾಲ್ಕನೇ ತ್ರೈಮಾಸಿಕ ದಲ್ಲಿ ಬಿಡುಗಡೆ ಮಾಡಿರುವ ಮೊತ್ತ |
|---|---|---|---|---|---|---|
| 1 | ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ: 2225-03-102-0-12 | | | | | |
| | ಆಬ್ಜೆಕ್ಟಿವ್ ಕೋಡ್-059 | 3099.00 | 774.75 | 774.75 | 774.75 | 774.75 |

**<u>ಷರತ್ತುಗಳು:-</u>**

1. ಸರ್ಕಾರದ ಆದೇಶದಲ್ಲಿ ವಿವಿಧ ಯೋಜನೆಗಳಿಗೆ ಮಂಜೂರು ಮಾಡಿರುವ ಅನುದಾನ ಬಿಡುಗಡೆ ಕುರಿತಂತೆ ಕಾಲಕಾಲಕ್ಕೆ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಕ್ರಮವಹಿಸತಕ್ಕದ್ದು.
2. ಅಲೆಮಾರಿ/ಅರೆಅಲೆಮಾರಿ ಕೋಶದ ಯೋಜನೆಗಳಿಗೆ ಸಂಬಂಧಿಸಿದಂತೆ ಅನುದಾನ ಬಳಕೆ ಬಗ್ಗೆ ಆರ್ಥಿಕ ಇಲಾಖೆಯ ಅನುಮತಿ ಪಡೆದು ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 339 ಬಿಎಂಎಸ್ 2021, ಬೆಂಗಳೂರು, ದಿನಾಂಕ: 16-03-2022 ರಂತೆ ನಿಯಮಾನುಸಾರ ಮುಂದಿನ ಕ್ರಮ ತೆಗೆದುಕೊಳ್ಳಬಹುದು.
3. 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಸಲ್ಲಿಸುವುದು.
4. ಯೋಜನಾವಾರು ಅನುದಾನ ಬಿಡುಗಡೆ ಮತ್ತು ಬಳಕೆಗೆ ಸಂಬಂಧಿಸಿದಂತೆ ಕಾಮಗಾರಿವಾರು/ ತಾಲ್ಲೂಕುವಾರು /ಜಿಲ್ಲಾವಾರು ವಿವರಗಳನ್ನು ಆಯುಕ್ತಾಲಯದ ಜಾಲತಾಣದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

16/3/22

--3